ಈ) ಹಾಗಿಲ್ಲದಿದ್ದಲ್ಲಿ, ರೂಪಾಯಿ 30.000–00 ರಲ್ಲಿ ಕರಾವಳಿ ಪ್ರದೇಶದಲ್ಲಿ ಮನೆ ನಿರ್ಮಿಸಿಕೊಳ್ಳಲು ಸಾಧ್ಯವೆಂದು ಸರ್ಕಾರ ತೀರ್ಮಾನಿಸಿದೆಯೇ?

ಶ್ರೀ ಧರ್ಮಸಿಂಗ್ (ಮುಖ್ಯ ಮಂತ್ರಿಗಳು) :

ಅ) ಮತ್ಸ್ಯ ಆಶ್ರಯ ಯೋಜನೆಯಲ್ಲಿ ಮನೆ ಮಂಜೂರಾತಿ ಕೋರಿ ಉಡುಪಿ ಜಿಲ್ಲೆಯಿಂದ 3738 ಅರ್ಜಿಗಳು ಬಂದಿರುತ್ತವೆ. ಕ್ಷೇತ್ರವಾರು ವಿವರಗಳು ಕೆಳಗಿನಂತಿರುತ್ತದೆ.

1	ಕಾಪು	327 ಅರ್ಜಿಗಳು
2	ಉಡುಪಿ	389 ಅರ್ಜಿಗಳು
3	ಬ್ರಹ್ಮಾವರ	1000 ಅರ್ಜಿಗಳು
4	ಕುಂದಾಪುರ	913 ಅರ್ಜಿಗಳು
5	ಬೈಂದೂರು	1019 ಅರ್ಜಿಗಳು
6	ಕಾರ್ಕಳ	90 ಅರ್ಜಿಗಳು

ಆ) ಪ್ರಸಕ್ತ ವರ್ಷದಲ್ಲಿ 5000 ಹೆಚ್ಚುವರಿ ಮನೆಗಳನ್ನು ಮಂಜೂರು ಮಾಡುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಮನೆ ನಿರ್ಮಾಣ ಮೊತ್ತವನ್ನು ಹೆಚ್ಚಿಸುವ ಪ್ರಸ್ತಾವನೆ ಇರುವುದಿಲ್ಲ.

ಈ) ಹೌದು.

4330 (4944) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) :– ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಶ್ಚಿಮವಾಹಿನಿ ನದಿಗಳ ನೀರು ಸಮುದ್ರ ಸೇರುವ ಮೊದಲು ಅಲ್ಲಲ್ಲಿ ಕಿಂಡಿ ಅಣೆಕಟ್ಟುಗಳನ್ನು ಕಟ್ಟಿ ಅಂತರ್ಜಲ ವೃದ್ಧಿಸುವ ಯೋಜನೆ ಸರ್ಕಾರ ಸಿದ್ಧಪಡಿಸಿದೆಯೇ;

ಆ) ಈ ಯೋಜನೆ ಕಾರ್ಯಗತ ಮಾಡಿದಲ್ಲಿ ಸಾಗುವಳಿ ಮತ್ತು ಕುಡಿಯುವ ನೀರಿನ ಸಮಸ್ಯೆಯನ್ನು ಸಾಧ್ಯವಾದಷ್ಟು ಬಗೆಹರಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು):

ಅ) ಹೌದು.

ಆ) ಅನುದಾನ ಲಭ್ಯತೆ ಮೇರೆಗೆ ಹಂತಹಂತವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಯೋಜಿಸಲಾಗಿದೆ.

4331 (5085) ಶ್ರೀ ಐವಾನ್ ನಿಗ್ಲಿ (ನಾಮಾಂಕಿತ) :– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಎನ್‌ಆರ್‌ಐ ಟೌನ್‌ಷಿಪ್‌ಗಾಗಿ ಸರ್ಕಾರದ ಮುಂದೆ ಯಾವುದಾದರೂ ಪ್ರಸ್ತಾವನೆ ಇದೆಯೇ;

ಆ) ಹೌದಾದಲ್ಲಿ, ಪ್ರಸ್ತಾಪಿತ ಪ್ರದೇಶ ಯಾವುದು ಹಾಗೂ ಈ ಟೌನ್‌ಷಿಪ್‌ನಲ್ಲಿ ದೊರೆಯುವ ಸೌಕರ್ಯಗಳಾವುವು?

ಶ್ರೀ ಧರ್ಮಸಿಂಗ್ (ಮುಖ್ಯ ಮಂತ್ರಿಗಳು) :

ಅ) ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

4332 (5086) ಶ್ರೀ ಐವಾನ್ ನಿಗ್ಲಿ (ನಾಮಾಂಕಿತ) :– ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಸುತ್ತಮುತ್ತ ಹೆಚ್ಚು ಉಪ ನಗರಗಳಿಗಾಗಿ ಯಾವುದಾದರೂ ಪ್ರಸ್ತಾವನೆ ಸರ್ಕಾರ ಹೊಂದಿದೆಯೇ;

ಆ) ಹೌದಾದಲ್ಲಿ, ಸ್ಥಳಗಳಾವುವು?

ಶ್ರೀ ಧರ್ಮಸಿಂಗ್ (ಮುಖ್ಯ ಮಂತ್ರಿಗಳು) :

ಅ) ಸದ್ಯಕ್ಕೆ ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

4333 (5227) ಶ್ರೀ ಐವಾನ್ ನಿಗ್ಲಿ (ನಾಮಾಂಕಿತ) :– ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರ ವರ್ತುಲ ರಸ್ತೆಯಲ್ಲಿ ರಸ್ತೆ ನಿಯಮ ಜಾರಿ ಪಾಲನೆ ಬಗ್ಗೆ ಸರ್ಕಾರದ ಪ್ರಸ್ತಾವನೆ ಏನಾದರೂ ಇದೆಯೇ;